# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತಾರನೆಯ ಅಧಿವೇಶನ

## <u>ಕಾರ್ಯಕಲಾಪಗಳ ಪಟ್ಟಿ</u>

**ಗುರುವಾರ, ದಿನಾಂಕ:17ನೇ ಮಾರ್ಚ್, 2022**

**(ಸಮಯ: ಬೆಳಗ್ಗೆ: 10.30 ಗಂಟೆಗೆ)**

***

## 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಹದಿನೆಂಟನೆಯ ಪಟ್ಟಿ

ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಹದಿನೆಂಟನೆಯ ಪಟ್ಟಿ

## 02. ಗಮನ ಸೆಳೆಯುವ ಸೂಚನೆಗಳು

01. **ಶ್ರೀ ಯು.ಬಿ. ವೆಂಕಟೇಶ್** ಅವರು ಹೈದ್ರಾಬಾದ್-ಕರ್ನಾಟಕ ಭಾಗದ ಸರ್ಕಾರದ ಎಲ್ಲಾ ಇಲಾಖೆಗಳಲ್ಲಿ ಉದ್ಯೋಗದಲ್ಲಿ ಮೀಸಲಾತಿ ಪ್ರಮಾಣ ಶೇ.100ಕ್ಕೆ 100ರಷ್ಟು ಹಾಗೂ ಉಳಿದ ಜಿಲ್ಲೆಗಳಲ್ಲಿ ಶೇ. 8ರಷ್ಟು ಅನುಷ್ಠಾನಕ್ಕೆ ತರುವಲ್ಲಿ ವಿಳಂಬ ಧೋರಣೆ ತಾಳಿರುವ ಕುರಿತು ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

02. **ಶ್ರೀ ಮುನಿರಾಜು ಗೌಡ ಪಿ.ಎಂ.** ಅವರು ಬೆಂಗಳೂರು ದಕ್ಷಿಣ ತಾಲ್ಲೂಕಿನ ಕೆಂಬತ್ತಳ್ಳಿ ಸರ್ವೆ ನಂ.85 ನೆಲ್ಲೂ ರೆಡ್ಡಿ ಕ್ವಾರಿ ಪ್ರದೇಶದಲ್ಲಿ ಅನಧಿಕೃತ ಜೈವಿಕ ತ್ಯಾಜ್ಯದ ವಿಲೇವಾರಿಯಿಂದ ಸುತ್ತಮುತ್ತಲಿನ ಗ್ರಾಮಗಳಲ್ಲಿ ವಾಸಿಸುತ್ತಿರುವ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವ ಕುರಿತು ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

03. **ಶ್ರೀ ಕೆ.ಎ. ತಿಪ್ಪೇಸ್ವಾಮಿ** ಅವರು ಪೊಲೀಸ್ ಇಲಾಖೆಯ ನ್ಯಾಯ ವಿಜ್ಞಾನ ಪ್ರಯೋಗಾಲಯ ಘಟಕಗಳಲ್ಲಿ ಖಾಲಿ ಇರುವ ಹುದ್ದೆಗಳ ನೇಮಕಾತಿ ಪ್ರಕ್ರಿಯೆಗೆ ಕನ್ನಡ ಭಾಷಾ ಪರೀಕ್ಷೆಯನ್ನು ಕಡ್ಡಾಯಗೊಳಿಸುವ ಕುರಿತು ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

04. **ಶ್ರೀ ಅರುಣ ಶಹಾಪುರ** ಅವರು ಅನುದಾನಿತ ಸಂಸ್ಥೆಗಳ ಶಿಕ್ಷಕ ಹಾಗೂ ಸಿಬ್ಬಂದಿ ವರ್ಗದವರಿಗೆ ಸೇವೆಗೆ ಸೇರಿದ ದಿನಾಂಕದಿಂದಲೇ ಸೇವಾ ಸೌಲಭ್ಯಗಳನ್ನು ಒದಗಿಸುವ ಕುರಿತು ಮಾನ್ಯ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

05. **ಶ್ರೀ ಅರವಿಂದ ಕುಮಾರ್ ಅರಳಿ** ಅವರು ರಾಜ್ಯದ ಕಾರ್ಮಿಕರಿಗೆ ಕನಿಷ್ಠ ವೇತನ ಹಾಗೂ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಕುರಿತು ಮಾನ್ಯ ಕಾರ್ಮಿಕ ಸಚಿವರ ಗಮನ ಸೆಳೆಯುವುದು.

..2..

## 03. ನಿಯಮ 330ರ ಮೇರೆಗೆ

01. **ಶ್ರೀ ಪುಟ್ಟಣ್ಣ** ಅವರು ಖಾಸಗಿ ಅನುದಾನಿತ/ ಅನುದಾನರಹಿತ ಶಾಲೆಗಳ ಪ್ರಥಮ ಮಾನ್ಯತೆ ಹಾಗೂ ನವೀಕರಣ ನಿಯಮಗಳನ್ನು ಸರಳೀಕರಣಗೊಳಿಸುವ ಕುರಿತು ಪ್ರಸ್ತಾಪಿಸುವುದು.

02. **ಡಾ. ವೈ.ಎ. ನಾರಾಯಣಸ್ವಾಮಿ, ಮಾನ್ಯ ಸರ್ಕಾರಿ ಮುಖ್ಯ ಸಚೇತಕರು,** ಅವರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಸಂಬಂಧಿಸಿದಂತೆ ವಿವಿಧ ನ್ಯಾಯಾಲಯಗಳಲ್ಲಿ ನಡೆಸುತ್ತಿರುವ ದಾವೆಗಳಿಗೆ ವಕೀಲರನ್ನು ನೇಮಿಸುವ ಪ್ರಕ್ರಿಯೆ ಕುರಿತು ಪ್ರಸ್ತಾಪಿಸುವುದು.

03. **ಡಾ. ತೇಜಸ್ವಿನಿಗೌಡ** ಅವರು ಬೆಂಗಳೂರಿನ ಸೆಂಚುರಿ ಕ್ಲಬ್ಬನ್ನು ಪಾರ್ಕ್‌ಜೋನ್‌ನಿಂದ ಹೊರತುಪಡಿಸದಿರುವುದರಿಂದ ಕ್ಲಬ್‌ನ ಅಭಿವೃದ್ಧಿ, ಪುನಶ್ಚೇತನ ಹಾಗೂ ನವೀಕರಣಕ್ಕೆ ಅಡಚಣೆ ಉಂಟಾಗಿರುವುದರ ಕುರಿತು ಪ್ರಸ್ತಾಪಿಸುವುದು.

## 04. ವಿತ್ತೀಯ ಕಾರ್ಯಕಲಾಪ

2022-23ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲಿನ ಮುಂದುವರೆದ ಚರ್ಚೆ.

**(ಏಳನೇ ದಿನ)**

## 05. ಅರ್ಧ ಗಂಟೆ ಕಾಲಾವಧಿ ಚರ್ಚೆ

ಕೋಲಾರ ಜಿಲ್ಲೆಯ ಕೆ.ಜಿ.ಎಫ್.ನಲ್ಲಿರುವ ಬೆಮಲ್ ಕಾರ್ಖಾನೆಯನ್ನು ಖಾಸಗೀಕರಣಗೊಳಿಸುತ್ತಿರುವ ಕುರಿತು ದಿನಾಂಕ:08.03.2022ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:159(1313)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಗೋವಿಂದರಾಜು** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**